# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| 01. | ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : 408 |
| 02. | ಮಾನ್ಯ ವಿಧಾನ ಪರಿಷತ್ತಿನ ಸದಸ್ಯರ ಹೆಸರು | : ಶ್ರೀ ಎಂ.ಎಲ್.ಅನಿಲ್ ಕುಮಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| 03. | ಉತ್ತರಿಸುವ ದಿನಾಂಕ | : 15.09.2022 |
| 04. | ಉತ್ತರಿಸುವ ಸಚಿವರು. | : ಮಾನ್ಯ ಗೃಹ ಸಚಿವರು |

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಅತ್ಯಾಚಾರದಂತಹ ಪ್ರಕರಣಗಳನ್ನು ಶೀಘ್ರ ಬಗೆಹರಿಸಿ ತಪ್ಪಿತಸ್ಥರಿಗೆ ಶಿಕ್ಷೆ ವಿಧಿಸುವ ನಿಟ್ಟಿನಲ್ಲಿ ವಿಳಂಭವಾಗುತ್ತಿರುವುದನ್ನು ಸರ್ಕಾರ ಗಂಭೀರವಾಗಿ ಪರಿಗಣಿಸಿದೆಯೇ; ಹಾಗಿದ್ದಲ್ಲಿ, ಈ ವಿಳಂಬಕ್ಕೆ ಕಾರಣಗಳೇನು ; (ಕಾರಣಗಳ ಕುರಿತಾಗಿ ಸಂಪೂರ್ಣ ಮಾಹಿತಿ ನೀಡುವುದು) | ಸರ್ಕಾರವು ಅತ್ಯಾಚಾರ ಪ್ರಕರಣಗಳನ್ನು ಗಂಭೀರವಾಗಿ ಪರಿಗಣಿಸಿದ್ದು, ಮಹಿಳೆಯರ ಮತ್ತು ಮಕ್ಕಳ ಮೇಲಿನ ಅಪರಾಧ ಪ್ರಕರಣಗಳಲ್ಲಿ ತನಿಖೆಯನ್ನು 60 ದಿನಗಳಲ್ಲಿ ಪೂರ್ಣಗೊಳಿಸಿ, ಆರೋಪಿಗಳ ವಿರುದ್ಧ ಸಂಬಂಧಿಸಿದ ನ್ಯಾಯಾಲಯಗಳಲ್ಲಿ ದೋಷಾರೋಪಣಾ ಪಟ್ಟಿಯನ್ನು ಸಲ್ಲಿಸಲು ಕ್ರಿಮಿನಲ್ ಲಾ ಅಮೆಂಡ್‌ಮೆಂಟ್ ಕಾಯ್ದೆಯನ್ನು ಜಾರಿಗೆ ತರುವ ಮೂಲಕ ಕಾನೂನಿಗೆ ಅಗತ್ಯ ತಿದ್ದುಪಡಿಯನ್ನು ಮಾಡಲಾಗಿದ್ದು, ಸದರಿ ಕಾಯ್ದೆಯನ್ನು ಕಟ್ಟುನಿಟ್ಟಾಗಿ ಅನುಷ್ಠಾನ ಗೊಳಿಸಲಾಗುತ್ತಿದೆ.<br>ಸದರಿ ಕಾಯ್ದೆಯ ತಿದ್ದುಪಡಿಯಿಂದ ಅತ್ಯಾಚಾರ ಪ್ರಕರಣಗಳಲ್ಲಿ ವಿಳಂಬವಾಗದಂತೆ ತನಿಖೆಯನ್ನು ಕಾಲಮಿತಿಯಲ್ಲಿ ನಿರ್ವಹಿಸಲಾಗುತ್ತಿದೆ. |
| ಆ) | ಶೃಂಗೇರಿಯ ಕುಂಚೇಬೈಲಿನಲ್ಲಿ 15 ವರ್ಷದ ಬಾಲಕಿ ಮೇಲೆ ನಡೆದ ಅತ್ಯಾಚಾರದ ಪ್ರಕರಣದಲ್ಲಿ ಆರೋಪಿಗಳಿಗೆ ಯಾವ ರೀತಿಯ ಶಿಕ್ಷೆ ವಿಧಿಸಲಾಗಿದೆ ; ಇನ್ನೂ ಶಿಕ್ಷೆ ವಿಧಿಸಲಾಗದಿದ್ದಲ್ಲಿ, ವಿಳಂಬವಾಗುತ್ತಿರಲು ಕಾರಣವೇನು ; (ಪೂರ್ಣ ಮಾಹಿತಿ ನೀಡುವುದು) | **ಶೃಂಗೇರಿಯ ಕುಂಚೇಬೈಲಿನಲ್ಲಿ 15 ವರ್ಷದ ಬಾಲಕಿ ಮೇಲಿನ ಅತ್ಯಾಚಾರ ಪ್ರಕರಣದ ವಿವರಗಳು**<br>ದಿನಾಂಕ:-30-01-2021 ರಂದು 21-00 ಗಂಟೆಗೆ ಅಧ್ಯಕ್ಷರು, ಮಕ್ಕಳ ಕಲ್ಯಾಣ ಸಮಿತಿ, ಚಿಕ್ಕಮಗಳೂರು ರವರು ಶೃಂಗೇರಿ ಪೊಲೀಸ್ ಠಾಣೆಗೆ ಶೃಂಗೇರಿ ತಾಲ್ಲೂಕು ಶಿಶು ಅಭಿವೃದ್ಧಿ ಯೋಜನಾ ಅಧಿಕಾರಿ ರವರ ಮೂಲಕ ನೀಡಿದ ದೂರಿನಲ್ಲಿ, ಗೋಚವಳ್ಳಿ ಗ್ರಾಮ, ಕುಂಚೇಬೈಲು ಅಂಚೆ, ಶೃಂಗೇರಿ ತಾಲ್ಲೂಕಿನ ಸುಮಾರು 15 ವರ್ಷ ಬಾಲಕಿಯ ಮೇಲೆ ಕಿಕ್ರೆ ಸ್ಮಾಲ್ ಅಭಿ ಮತ್ತು ಇತರರು ನಿರಂತರ ಅತ್ಯಾಚಾರ ನಡೆಸಿ ಲೈಂಗಿಕ ದೌರ್ಜನ್ಯ ನಡೆಸಿರುತ್ತಾರೆಂದು, ಸದರಿಯವರ ವಿರುದ್ಧ ಹಾಗೂ ಈ ಕೃತ್ಯದಲ್ಲಿ ಸಹಕಾರ ನೀಡಿದ್ದ ಬಾಲಕಿಯ ಚಿಕ್ಕಮ್ಮ ಗೀತಾ ಕೋಂ ಸುರೇಶ್ ರವರ ಮತ್ತು ಇತರರ ವಿರುದ್ಧ ಕಲಂ 201, 370, 375, 376(3), 376(ಎನ್) ಐ.ಪಿ.ಸಿ, ಬಾಲ ನ್ಯಾಯ ಕಾಯ್ದೆ 75, ಕಲಂ 4(1), 3 ಮತ್ತು 5 ಪೋಕ್ಸೋ ಕಾಯ್ದೆ ಹಾಗೂ ಐ.ಟಿ.ಪಿ ಕಾಯ್ದೆ ಕಲಂ 6 ರಂತೆ ಹಾಗೂ ಎಂ.ಜಿ.ಆರ್ ಕ್ರಷರ್ ಮಾಲೀಕರು, ಗೋಚವಳ್ಳಿ ಗ್ರಾಮ, ಶೃಂಗೇರಿ ತಾಲ್ಲೂಕು ಇವರ |

| | | |
|---|---|---|
| | | ವಿರುದ್ಧ ಬಾಲ ಕಾರ್ಮಿಕ ನಿಷೇಧ ಕಾಯ್ದೆ ಅಡಿಯಲ್ಲಿ ಪ್ರಕರಣವನ್ನು ದಾಖಲಿಸುವಂತೆ ದೂರನ್ನು ನೀಡಲಾಗಿರುತ್ತದೆ.<br>ಈ ದೂರಿನನ್ವಯ ಶೃಂಗೇರಿ ಪೊಲೀಸ್ ಠಾಣೆಯಲ್ಲಿ ಮೊ.ನಂ.12/2021 ಕಲಂ :201, 370, 376(3)(ಎನ್) ಐಪಿಸಿ ಮತ್ತು ಬಾಲನ್ಯಾಯ ಕಾಯ್ದೆ 75, ಕಲಂ :4(1), 3 ಮತ್ತು 5 ಪೋಕ್ಸೋ ಕಾಯ್ದೆ, ಹಾಗೂ ಐಟಿಪಿ ಕಾಯ್ದೆ ಕಲಂ:6 ಹಾಗೂ ಕಲಂ 3 ಸಹಿತ 14 The Child and Adolescent Labour Act 1986 ರೀತ್ಯಾ ಪಿ.ಐ. ಶೃಂಗೇರಿ ಪೊಲೀಸ್ ಠಾಣೆ ರವರು ಕೇಸು ದಾಖಲಿಸಿ, ತನಿಖೆಯನ್ನು ಕೈಗೊಳ್ಳಲಾಗಿರುತ್ತದೆ.<br>ಈ ಪ್ರಕರಣದಲ್ಲಿ 52 ಜನ ಆರೋಪಿತರುಗಳನ್ನು ದಸ್ತಗಿರಿ ಮಾಡಿ ಘನ ನ್ಯಾಯಾಲಯದ ಮುಂದೆ ಹಾಜರುಪಡಿಸಿದ್ದು, ಘನ ನ್ಯಾಯಾಲಯದ ಆದೇಶದಂತೆ ಒಟ್ಟು 51 ಜನ ಆರೋಪಿತರುಗಳು ಹಾಲಿ ನ್ಯಾಯಾಂಗ ಬಂಧನದಲ್ಲಿ ಇರುತ್ತಾರೆ.<br>ಆರೋಪಿ ನಂ:15 ಯತೀಶ್@ ಯೋಗೀಶ್ ಈತನು ಘನ ಉಚ್ಚ ನ್ಯಾಯಾಲಯದ ಜಾಮೀನಿನ ಮೇಲಿರುತ್ತಾನೆ. ಅಲ್ಲದೆ ಆರೋಪಿತರುಗಳು ಕೃತ್ಯ ಎಸಗಿದ ಸ್ಥಳ, ದಿನಾಂಕ, ಹಾಗೂ ಆರೋಪಿತರುಗಳ ಭಾಗಿಯಾಗುವಿಕೆಯ ಆಧಾರದ ಮೇಲೆ ಆಯಾ ಆರೋಪಿತರುಗಳ ವಿರುದ್ಧ ಪ್ರತ್ಯೇಕವಾಗಿ ಒಟ್ಟು 39 ದೋಷಾರೋಪಣ ಪತ್ರಗಳನ್ನು ಘನ ನ್ಯಾಯಾಲಯಕ್ಕೆ ಸಲ್ಲಿಸಲಾಗಿರುತ್ತದೆ. ಸದರಿ ಎಲ್ಲಾ 39 ಪ್ರತ್ಯೇಕ ಪ್ರಕರಣಗಳಿಗೂ Spl(P)CC No ಗಳು ಬಂದಿರುತ್ತದೆ. ಪ್ರಸ್ತುತ ಎಲ್ಲಾ ಪ್ರಕರಣಗಳು ಸಾಕ್ಷಿ ವಿಚಾರಣೆಗಾಗಿ ಬಂದಿದ್ದು ಮಾನ್ಯ ಅಧಿಕ ಜಿಲ್ಲಾ & ಸತ್ರ ನ್ಯಾಯಾಲಯ ಹಾಗೂ ಚಿಕ್ಕಮಗಳೂರು 01ನೇ ತ್ವರಿತಗತಿ ಸತ್ರ ನ್ಯಾಯಾಲಯದ ವಿಚಾರಣೆಯಲ್ಲಿರುತ್ತದೆ. |
| ಇ) | ಸ್ತ್ರೀಯರ ಮೇಲಿನ ಲೈಂಗಿಕ ದೌರ್ಜನ್ಯವನ್ನು ಸಂಪೂರ್ಣವಾಗಿ ನಿಗ್ರಹಿಸುವ ನಿಟ್ಟಿನಲ್ಲಿ ಸರ್ಕಾರದ ಆಲೋಚನೆ ಏನು? (ವಿವರವಾದ ಮಾಹಿತಿ ನೀಡುವುದು) | **ಮಹಿಳೆಯರ ಮತ್ತು ಮಕ್ಕಳ ಮೇಲಿನ ಅತ್ಯಾಚಾರ & ದೌರ್ಜನ್ಯ ಪ್ರಕರಣಗಳನ್ನು ತಡೆಗಟ್ಟುವ ಸಂಬಂಧ ಸರ್ಕಾರವು ಈ ಕೆಳಕಂಡ ಕ್ರಮಗಳನ್ನು ಕೈಗೊಂಡಿರುತ್ತದೆ.**<br>➢ ಅತ್ಯಾಚಾರ, ಪೋಕ್ಸೋ ಪ್ರಕರಣಗಳ ತನಿಖೆಯನ್ನು ಕ್ರಿಮಿನಲ್ ಲಾ ಅಮೆಂಡ್‌ಮೆಂಟ್ ಅನ್ವಯ ನಿಗಧಿಪಡಿಸಿರುವ 60 ದಿನಗಳ ಕಾಲಮಿತಿಯಲ್ಲಿ ತನಿಖೆಯನ್ನು ಪೂರ್ಣಗೊಳಿಸಲು ಸುತ್ತೋಲೆಯನ್ನು ಹೊರಡಿಸಲಾಗಿದೆ.<br>➢ ಮಹಿಳೆಯರ ಮೇಲಿನ ಲೈಂಗಿಕ ದೌರ್ಜನ್ಯ |

| | | |
|---|---|---|
| | | ಪ್ರಕರಣಗಳ ಕುರಿತು ತನಿಖೆಯಲ್ಲಿ ಉಪಯೋಗವಾಗುವ ಅಂಶಗಳಿಗೆ ಸಂಬಂಧಿಸಿದಂತೆ ನಿರ್ದಿಷ್ಟ ಕಾರ್ಯ ವಿಧಾನವನ್ನು ಸಿದ್ಧಪಡಿಸಿ, ಎಲ್ಲಾ ಘಟಕಾಧಿಕಾರಿಗಳಿಗೆ ಕಳುಹಿಸಲಾಗಿರುತ್ತದೆ.<br>➢ ಮಹಿಳೆಯರ ರಕ್ಷಣೆಗಾಗಿ, ಮಹಿಳಾ ಸಹಾಯವಾಣಿ, ಸ್ಪಂದನ ಸಹಾಯವಾಣಿಯು ಕಾರ್ಯನಿರ್ವಹಿಸುತ್ತಿದೆ.<br>➢ ರಾಜ್ಯದ 800 ಪೊಲೀಸ್ ಠಾಣೆಗಳಲ್ಲಿ ಮಹಿಳೆಯರಿಗಾಗಿ ಪ್ರತ್ಯೇಕವಾಗಿ ಮಹಿಳಾ ಹೆಲ್ಪ್ ಡೆಸ್ಕ್‌ಗಳನ್ನು ಸ್ಥಾಪಿಸಲಾಗಿದೆ.<br>➢ ದಿನದ 24 ಗಂಟೆಯೂ ಸಹ ಮಹಿಳೆಯರ ಮತ್ತು ಮಕ್ಕಳ ಸುರಕ್ಷತೆಗಾಗಿ "ಪಿಂಕ್ ಹೊಯ್ಸಳ" ಮತ್ತು 112 ಗಸ್ತುವಾಹನ ಗಸ್ತು ಕಾರ್ಯ ನಿರ್ವಹಿಸುತ್ತಿವೆ.<br>➢ ರಾಜ್ಯದ ಇತರೆ ಜಿಲ್ಲೆಗಳಾದ ಬಾಗಲಕೋಟೆ ಜಿಲ್ಲೆಯಲ್ಲಿ ಚನ್ನಮ್ಮ ಪಡೆ, ಬಳ್ಳಾರಿ ಜಿಲ್ಲೆಯಲ್ಲಿ ಓಬವ್ವ ಪಡೆ, ದಾವಣಗೆರೆ ಜಿಲ್ಲೆಯಲ್ಲಿ ದುರ್ಗಾ ಪಡೆ, ಗದಗ ಜಿಲ್ಲೆಯಲ್ಲಿ ಚನ್ನಮ್ಮ ಪಡೆ, ಉತ್ತರ ಕನ್ನಡ ಜಿಲ್ಲೆಯಲ್ಲಿ ಶರಾವತಿ ಓಬವ್ವ ಪಡೆ, ಬೀದರ್ ಜಿಲ್ಲೆಯಲ್ಲಿ ರಾಣಿ ಚನ್ನಮ್ಮ ವಾಹನವು ಹೆಚ್ಚಾಗಿ ಮಹಿಳೆಯರು ಓಡಾಡುವ ಜನನಿಬಿಡ ಸ್ಥಳಗಳಲ್ಲಿ ಹಾಗೂ ಶಾಲಾ ಕಾಲೇಜುಗಳ ಬಳಿ ಹೆಚ್ಚಿನ ಗಸ್ತು ಕಾರ್ಯವನ್ನು ನಿರ್ವಹಿಸುತ್ತಿರುತ್ತದೆ.<br>➢ ಮಹಿಳೆಯರು ಕರ್ತವ್ಯ ನಿರ್ವಹಿಸುವ ಎಲ್ಲಾ ಕಛೇರಿಗಳಲ್ಲಿ, ಸಂಸ್ಥೆಗಳಲ್ಲಿ, ಕಾರ್ಖಾನೆಗಳಲ್ಲಿ ವಿಶೇಷವಾಗಿ ಸುರಕ್ಷತೆಯ ಬಗ್ಗೆ ಮಹಿಳಾ ಸೆಕ್ಯೂರಿಟಿಗಳನ್ನು ನಿಯೋಜಿಸುವಂತೆ ಸೂಚಿಸಲಾಗಿರುತ್ತದೆ.<br>➢ ಮಹಿಳೆಯರ ಮೇಲಿನ ದೌರ್ಜನ್ಯ ಪ್ರಕರಣಗಳಲ್ಲಿ ಭಾಗಿಯಾದ ಆರೋಪಿಗಳನ್ನು ಶೀಘ್ರವಾಗಿ ಬಂಧಿಸಿ ಆರೋಪಿಗಳ ವಿರುದ್ಧ ಮಾನ್ಯ ನ್ಯಾಯಾಲಯಕ್ಕೆ ದೋಷಾರೋಪಣಾ ಪಟ್ಟಿ ಸಲ್ಲಿಸಲಾಗುತ್ತಿದೆ.<br>➢ ಹಗಲು ಮತ್ತು ರಾತ್ರಿ ವೇಳೆಯಲ್ಲಿ ಕೆಲಸಕ್ಕೆ ಹೋಗುವ ಮಹಿಳೆಯರ ಸುರಕ್ಷತೆಗೆ ಸಕಲ ಮುನ್ನೆಚ್ಚರಿಕೆ ವಹಿಸುವಂತೆ ಸಂಬಂಧಪಟ್ಟ ಕಂಪನಿಗಳ, ಕಾಲ್ ಸೆಂಟರ್‌ಗಳ, ಪಿಜಿ ಸೆಂಟರ್‌ಗಳ ಮಾಲೀಕರಿಗೆ/ವ್ಯವಸ್ಥಾಪಕರಿಗೆ ಸಲಹೆ, ಸೂಚನೆಗಳನ್ನು ನೀಡಲಾಗುತ್ತಿದೆ.<br>➢ ಮಹಿಳೆಯರು ಓಡಾಡುವ ಸ್ಥಳಗಳ ಬಳಿ, ಬಸ್ ನಿಲ್ದಾಣದಲ್ಲಿ, ಶಾಲಾ ಕಾಲೇಜುಗಳ ಬಳಿ ಸಿಬ್ಬಂದಿಗಳನ್ನು ಪಾಯಿಂಟ್ ಕರ್ತವ್ಯಕ್ಕೆ ನೇಮಕ ಮಾಡಲಾಗುತ್ತಿದ್ದು, ಸದರಿ ಸ್ಥಳಗಳ ಬಳಿ ಹೊಯ್ಸಳ ಹಾಗೂ ಚೀತಾ ವಾಹನಗಳನ್ನು ಗಸ್ತು ಮಾಡಿ ಇಂತಹ ಕೃತ್ಯಗಳು ನಡೆಯದಂತೆ ಸೂಕ್ತ ಮುನ್ನೆಚ್ಚರಿಕೆಯನ್ನು ಕೈಗೊಳ್ಳಲಾಗಿದೆ.<br>➢ ಮಹಿಳೆಯರ ಸರಗಳ್ಳತನ ತಡೆಗಟ್ಟುವ ಸಲುವಾಗಿ, |

| | | |
|---|---|---|
| | | ಅರಿವು ಮೂಡಿಸುವ ಕಾರ್ಯಕ್ರಮ ನಡೆಸಲಾಗುತ್ತಿದ್ದು, ಮುಂಜಾಗ್ರತಾ ಕ್ರಮವಾಗಿ, ಪ್ರಮುಖ ಸ್ಥಳಗಳಲ್ಲಿ ಸಿ.ಸಿ.ಟಿ.ವಿ. ಕ್ಯಾಮೆರಾಗಳನ್ನು ಅಳವಡಿಸಲಾಗುತ್ತಿದೆ ಹಾಗೂ ಈ ಸಂಬಂಧ ಕರಪತ್ರಗಳ ಹಾಗೂ ಪೋಸ್ಟರ್‌ಗಳ ಮೂಲಕ ಮಹಿಳೆಯರಲ್ಲಿ ಜಾಗೃತಿ ಮೂಡಿಸಲಾಗುತ್ತಿದೆ.<br>➢ ಮಹಿಳೆಯರು ಮತ್ತು ಮಕ್ಕಳು ಹೆಚ್ಚಿನ ಸಂಖ್ಯೆಯಲ್ಲಿ ಕೆಲಸ ಮಾಡುವ ಕಛೇರಿಗಳಲ್ಲಿ ಆಂತರಿಕ ದೂರು ನಿರ್ವಹಣಾ ಸಮಿತಿಯನ್ನು ರಚಿಸಲಾಗಿರುತ್ತದೆ.<br>➢ ಸಂಕಷ್ಟದಲ್ಲಿರುವ/ತೊಂದರೆಯಲ್ಲಿರುವ ಮಹಿಳೆಯ ಸಹಾಯ ಹಾಗೂ ಸುರಕ್ಷತೆಗಾಗಿ ಮಹಿಳಾ ಸುರಕ್ಷಾ ಆ್ಯಪ್ ಅನ್ನು ಪರಿಚಯಿಸಲಾಗಿದೆ. ಈ ಮಹಿಳಾ ಸುರಕ್ಷಾ ಆ್ಯಪ್ ಯಶಸ್ವಿಯಾಗಿ ಕಾರ್ಯನಿರ್ವಹಿಸುತ್ತಿದೆ.<br>➢ ಸದರಿ ವಿಶೇಷ ಪಡೆಗಳಲ್ಲಿ ವಿಶೇಷವಾಗಿ ಮಹಿಳಾ ಪೊಲೀಸ್ ಸಿಬ್ಬಂದಿಗಳನ್ನು ನಿಯೋಜಿಸಿದ್ದು ಅವರುಗಳಿಂದ ಎಲ್ಲಾ ಶಾಲಾ/ಕಾಲೇಜುಗಳ ಹತ್ತಿರ ಮತ್ತು ಮಹಿಳೆಯರು & ಮಕ್ಕಳು ಹೆಚ್ಚಿನ ಸಂಖ್ಯೆಯಲ್ಲಿ ಸೇರುವ ಪ್ರದೇಶಗಳು ಹಾಗೂ ಜನನಿಬಿಡ ಸ್ಥಳಗಳಲ್ಲಿ ವಿಶೇಷ ಗಸ್ತು ಕಾರ್ಯವನ್ನು ಕೈಗೊಳ್ಳಲಾಗುತ್ತಿದೆ.<br>➢ ಸದರಿ ಸಿಬ್ಬಂದಿ ರವರು ತೆರೆದ ಮನೆ ಯೋಜನೆಯ ಮೂಲಕ ಮಕ್ಕಳಿಗಾಗಿ ಹಾಗೂ ಜನ ಸಂಪರ್ಕ ಸಭೆಯ ಮೂಲಕ ಮಹಿಳೆಯರಿಗೆ ಸ್ವಯಂ ರಕ್ಷಣೆಯ ಬಗ್ಗೆ ಕರಾಟೆ ಮತ್ತು ಕೆಲವು ಕೌಶಲ್ಯಗಳ ಬಗ್ಗೆ ಪ್ರಾತ್ಯಕ್ಷಿಕೆಯ ಮೂಲಕ ಜಾಗೃತಿ ಮೂಡಿಸಲಾಗುತ್ತಿರುತ್ತದೆ.<br>➢ ಮಹಿಳೆಯರು ಮತ್ತು ಹೆಣ್ಣು ಮಕ್ಕಳ ಮೇಲೆ ನಡೆಯುತ್ತಿರುವ ದೌರ್ಜನ್ಯಗಳನ್ನು ಹತ್ತಿಕ್ಕುವ ನಿಟ್ಟಿನಲ್ಲಿ ಬೆಂಗಳೂರು ನಗರದಲ್ಲಿ "ವೀರವನಿತೆ" ತಂಡವನ್ನು ರಚಿಸಿ, ಸದರಿಯವರಿಗೆ 6 ತಿಂಗಳು ನುರಿತ ತಜ್ಞರಲ್ಲಿ ಸ್ವಯಂ ರಕ್ಷಣೆ ಮತ್ತು ಮಾರ್ಷಿಯಲ್ ಆರ್ಟ್ಸ್ ಬಗ್ಗೆ ತರಬೇತಿ ನೀಡಿ, ನಂತರ ಸದರಿ ಯವರುಗಳನ್ನು 3 ತಂಡಗಳನ್ನಾಗಿ ರಚಿಸಿ ಮೇಲಾಧಿಕಾರಿಗಳ ನೇತೃತ್ವದಲ್ಲಿ ನಗರದ ವಿವಿಧ ಶಾಲಾ-ಕಾಲೇಜುಗಳು ಮತ್ತು ಮಹಿಳೆಯರು ಹೆಚ್ಚಾಗಿ ಕೆಲಸ ನಿರ್ವಹಿಸುವ ಗಾರ್ಮೆಂಟ್ಸ್‌ಗಳು, ಮಾಲ್ ಮತ್ತಿತರ ಕಡೆಗಳಲ್ಲಿ ಸದರಿಯವರುಗಳಿಗೆ ಸ್ವಯಂ ರಕ್ಷಣೆಯ ಬಗ್ಗೆ ಮಾಹಿತಿ ಹಾಗೂ ತರಬೇತಿಗಳನ್ನು ನೀಡಲಾಗಿರುತ್ತದೆ. |

**HD 16 SDN 2022**

**(ಆರಗ ಜ್ಞಾನೇಂದ್ರ)**
ಗೃಹ ಸಚಿವರು.